# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಹಿಡ್ಕಲ್ ಮೀನುಮರಿ ಪಾಲನಾ ಕೇಂದ್ರದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ:- (1) ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ ರಾಜ್ಯ ಮಟ್ಟದ ಯೋಜನಾ ಅನುಮೋದನಾ ಸಮಿತಿಯ ದಿನಾಂಕ: 16-06-2016 ರ ಸಭೆಯ ನಡವಳಿ.

(2) ಕೃಷಿ ಇಲಾಖೆ ಆದೇಶ ಸಂಖ್ಯೆ: ಎಜಿಡಿ/120/ಎಎಂಎಸ್/2016 (ಭಾಗ-1) ದಿನಾಂಕ: 09-11-2016.

(3) ಪತ್ರ ಸಂಖ್ಯೆ: ಮೀನಿ/19/ರಾಕೃವಿಯೋ/2016, ದಿನಾಂಕ: 09-01-2016.

RKVY
23/4/17

******

## ಪ್ರಸ್ತಾವನೆ:

C-10465

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 16-06-2016 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ "ನಿರ್ಮಲ ಮೀನು ಮಾರಾಟ ವ್ಯವಸ್ಥೆಯ ವಿಸ್ತರಣೆ ಮತ್ತು ಆಧುನೀಕರಣ" ಎಂಬ ಯೋಜನೆಗೆ ರಾಜ್ಯ ಮಟ್ಟದ ಮಂಜೂರಾತಿ ಸಮಿತಿಯು ಅನುಮೋದನೆ ನೀಡಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಆದೇಶದಲ್ಲಿ, ಮೀನುಗಾರಿಕೆ ಇಲಾಖೆಗೆ ಅನುದಾನದ ಕೊರತೆಯಿಂದಾಗಿ ರೂ.282.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರದಲ್ಲಿ, ಬೆಳಗಾವಿ ಜಿಲ್ಲೆ, ಹುಕ್ಕೇರಿ ತಾಲ್ಲೂಕು ಹಿಡ್ಕಲ್ ಮೀನುಮರಿ ಪಾಲನಾ ಕೇಂದ್ರದ ಉನ್ನತೀಕರಣ ಹಾಗೂ ಮೀನುಗಾರಿಕೆ ಇಲಾಖೆಯ ಇತರೆ ಕಾಮಗಾರಿಯನ್ನು ರೂ.60.00 ಲಕ್ಷಗಳ ವೆಚ್ಚದಲ್ಲಿ ಕರ್ನಾಟಕ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ ಸಂಸ್ಥೆ ಮೂಲಕ ಕೈಗೊಳ್ಳಲು ಆಡಳಿತಾತ್ಮಕ ಮಂಜೂರಾತಿ ನೀಡಲು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ 13 ಮೀಇಯೋ 2017, ಬೆಂಗಳೂರು ದಿನಾಂಕ: 21-02-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಲ್ಲಿ "ನಿರ್ಮಲ ಮೀನು ಮಾರಾಟ ವ್ಯವಸ್ಥೆಯ ವಿಸ್ತರಣೆ ಮತ್ತು ಆಧುನೀಕರಣ" ಯೋಜನೆಯಡಿ ಬೆಳಗಾವಿ ಜಿಲ್ಲೆ, ಹುಕ್ಕೇರಿ ತಾಲ್ಲೂಕಿನ ಹಿಡ್ಕಲ್ ಮೀನುಮರಿ ಪಾಲನಾ ಕೇಂದ್ರದಲ್ಲಿ ಈ ಕೆಳಕಂಡ ಕಾಮಗಾರಿಯನ್ನು ರೂ.60.00 ಲಕ್ಷ (ಅರವತ್ತು ಲಕ್ಷ ರೂಪಾಯಿಗಳು

ಮಾತ್ರ)ಗಳ ವೆಚ್ಚದಲ್ಲಿ ಕರ್ನಾಟಕ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ ಸಂಸ್ಥೆ ಮೂಲಕ ಕೈಗೊಳ್ಳಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

| ಕ್ರ. ಸಂ. | ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1) | Upgradation of fish ponds and other works of Fisheries Department at Hidkal Dam in Hukkeri Taluk | 60.00 |

ಸದರಿ ಮೊತ್ತವನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ ಸಂಸ್ಥೆ, ಬೆಂಗಳೂರು ಇವರು ಸಲ್ಲಿಸುವ ಪೇಯೀಸ್ ರಸೀದಿಗೆ ಮೀನುಗಾರಿಕೆ ನಿರ್ದೇಶಕರು ಮೇಲು ರುಜು ಮಾಡಿ ರಾಜ್ಯ ಹುಜೂರ್ ಖಜಾನೆಯಿಂದ ಹಣ ಸೆಳೆದು ಪಾವತಿಸಲು ಹಾಗೂ ಕೆ.ಆರ್.ಐ.ಡಿ.ಎಲ್. ಸಂಸ್ಥೆಯಲ್ಲಿ ಠೇವಣಿ ಇಡಲು ಅನುಮತಿ ನೀಡಲಾಗಿದೆ.

ಈ ಯೋಜನೆಯಡಿ ಉಂಟಾಗುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2401-00-800-1-57-ಆರ್.ಕೆ.ವಿ.ವೈ.-059-ಇತರೆ ಖರ್ಚುಗಳು (ಯೋಜನೆ)ಅಡಿ ಒದಗಿಸಿದ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ದಿನಾಂಕ: 16-06-2016 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ 14ನೇ ರಾಜ್ಯ ಮಟ್ಟದ ಮಂಜೂರಾತಿ ಸಮಿತಿ ಸಭೆಯ ನಿರ್ಣಯದಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಶ್ಮಿ ಶಿವಶಂಕರ ಪೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)(ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು
4) ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
5) ಮೀನುಗಾರಿಕೆ ಉಪ ನಿರ್ದೇಶಕರು, ಬೆಳಗಾವಿ.
6) ಸರ್ಕಾರದ ಉಪ ಕಾರ್ಯದರ್ಶಿ ಹಾಗು ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7) ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
8) ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿ., ಬೆಂಗಳೂರು.
10) ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಂ / ಹೆಚ್ಚುವರಿ ಪ್ರತಿಗಳು.